# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 176 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14.02.2024. |
| ಉತ್ತರಿಸುವ ಸಚಿವರು | : | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಒಟ್ಟು 136 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಶಾಲೆಗಳಲ್ಲಿ ಬೋಧನೆ ಮಾಡುತ್ತಿರುವ ತರಗತಿಗಳ ವಿವರ ಈ ಕೆಳಕಂಡಂತಿದೆ. |
| ಆ) | ಸದರಿ ವಸತಿ ಶಾಲೆಗಳಲ್ಲಿ ಯಾವ ತರಗತಿಯವರೆಗೆ ಬೋಧನೆ ಮಾಡಲಗುತ್ತಿದೆ: | |

| | |
|---|---|
| ಮೊರಾರ್ಜಿ ದೇಸಾಯಿ ವಸತಿ ಶಾಲೆ | 6 ರಿಂದ 10ನೇ ತರಗತಿಯವರೆಗೆ |
| ಮೊರಾರ್ಜಿ ದೇಸಾಯಿ ಸಂಯೋಜಿತ (Integrated) ವಸತಿ ಶಾಲೆ | 6 ರಿಂದ 12ನೇ ತರಗತಿಯವರೆಗೆ |
| ಡಾ\|\| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ | 6 ರಿಂದ 12ನೇ ತರಗತಿಯವರೆಗೆ |
| ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು | 11 ರಿಂದ 12ನೇ ತರಗತಿಯವರೆಗೆ |
| ಸರ್ಕಾರಿ ಮುಸ್ಲಿಂ ವಸತಿ ಶಾಲೆ | 6 ರಿಂದ 10ನೇ ತರಗತಿಯವರೆಗೆ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಸದರಿ ವಸತಿ ಶಾಲೆಗಳಿಗೆ ಮಂಜೂರು ಮಾಡಿರುವ, ನೇಮಕಗೊಂಡಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು: (ಪ್ರತ್ಯೇಕವಾಗಿ ವಿವರ ನೀಡುವುದು) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿನ ವಸತಿ ಶಾಲೆಗಳಿಗೆ ಮಂಜೂರಾಗಿರುವ ಹಾಗೂ ಭರ್ತಿಯಾಗಿರುವ ಬೋಧಕ/ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿವೆ. |

| ಕ್ರ. ಸಂ | ವಸತಿ ಶಾಲೆ | ಮಂಜೂರಾದ ಹುದ್ದೆಗಳ ಸಂಖ್ಯೆ | | ಭರ್ತಿಯಾದ ಹುದ್ದೆಗಳ ಸಂಖ್ಯೆ | |
|---|---|---|---|---|---|
| | | ಬೋಧಕ | ಬೋಧಕೇತರ | ಬೋಧಕ | ಬೋಧಕೇತರ |
| 1 | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ ಮೊರಾರ್ಜಿ ದೇಸಾಯಿ ಸಂಯೋಜಿತ ವಸತಿ ಶಾಲೆ/ ಡಾ\|\| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ | 1308 | 390 | 712 | 160 |
| 2 | ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ)/ ಡಾ\|\| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ | 184 | 46 | 77 | 18 |
| 3 | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪೂರ್ವ ವಸತಿ ಕಾಲೇಜು/ ಡಾ\|\| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ | 307 | 42 | 167 | 20 |
| 4 | ಸರ್ಕಾರಿ ಮುಸ್ಲಿಂ ವಸತಿ ಶಾಲೆ | 45 | 60 | 19 | 34 |
| | ಒಟ್ಟು | 1844 | 538 | 975 | 232 |

<table>
<tr><td>ಈ)</td><td>ಮೌಲಾನಾ ಆಜಾದ್ ಮಾದರಿ ಶಾಲೆಗಳ ಸಂಖ್ಯೆ ಹಾಗೂ ಖಾಲಿ ಇರುವ ಬೋಧಕ/ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು: (ಪ್ರತ್ಯೇಕವಾಗಿ ವಿವರ ನೀಡುವುದು)</td><td>2017-18ನೇ ಸಾಲಿನಲ್ಲಿ 100 ಮೌಲಾನಾ ಆಜಾದ್ ಮಾದರಿ ಶಾಲೆಗಳು ಹಾಗೂ 2018-19ನೇ ಸಾಲಿನಲ್ಲಿ 100 ಮೌಲಾನಾ ಆಜಾದ್ ಮಾದರಿ ಶಾಲೆಗಳು ಮಂಜೂರಾಗಿದ್ದು, ಒಟ್ಟು 200 ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿವೆ.
<table>
<tr><th rowspan="2">ಕ್ರ. ಸಂ</th><th rowspan="2">ಮೌಲಾನಾ ಆಜಾದ್ ಮಾದರಿ ಶಾಲೆಗಳು ಪ್ರಾರಂಭವಾದ ವರ್ಷ</th><th colspan="2">ಖಾಲಿ ಇರುವ ಹುದ್ದೆಗಳ ಸಂಖ್ಯೆ</th></tr>
<tr><th>ಬೋಧಕ</th><th>ಬೋಧಕೇತರ</th></tr>
<tr><td>1</td><td>2017-18</td><td>238</td><td>0</td></tr>
<tr><td>2</td><td>2018-19</td><td colspan="2">ಹುದ್ದೆಗಳು ಮಂಜೂರಾಗಿರುವುದಿಲ್ಲ.</td></tr>
</table>
</td></tr>
<tr><td>ಉ)</td><td>ಸದರಿ ಶಾಲೆಗಳಲ್ಲಿ 10 ರಿಂದ 12ನೇ ತರಗತಿಯವರೆಗೆ ಉನ್ನತೀಕರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-168ರಲ್ಲಿ ಘೋಷಿಸಿರುವಂತೆ 62 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು 6ನೇ ತರಗತಿಯಿಂದ 12ನೇ ತರಗತಿಯವರೆಗೆ ಸಂಯೋಜಿತ ಶಾಲೆಗಳನ್ನಾಗಿ ಉನ್ನತೀಕರಿಸಿ ಪ್ರಸಕ್ತ ಸಾಲಿನಿಂದ ಪ್ರಥಮ ಪಿ.ಯು.ಸಿ ತರಗತಿಗಳನ್ನು ಪ್ರಾರಂಭಿಸಿ ನಿಗಧಿಪಡಿಸಿದ ಅನುದಾನದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.</td></tr>
<tr><td>ಊ)</td><td>ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಅಲ್ಪಸಂಖ್ಯಾತರ ನಿರ್ದೇಶನಾಲಯದಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಶಾಲೆಗಳಲ್ಲಿನ 1387 ಬೋಧಕ/ಬೋಧಕೇತರ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮಕೈಗೊಳ್ಳಾಗಿದ್ದು, ಈ ಪೈಕಿ 1329 ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿ ಸ್ವೀಕೃತವಾಗಿರುತ್ತದೆ. ಸದರಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿದ ನಂತರ ಖಾಲಿ ಉಳಿದಿರುವ 473 ಬೋಧಕ/ಬೋಧಕೇತರ ಹುದ್ದೆಗಳಿಗೆ ಹೆಚ್ಚುವರಿ ಆಯ್ಕೆ ಪಟ್ಟಿ ಸ್ವೀಕೃತವಾಗುತ್ತಿದ್ದು, ನಿಯಮಾನುಸಾರ ನೇಮಕಾತಿ ಆದೇಶ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>ಮುಂದುವರೆದು, ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು/ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ.</td></tr>
<tr><td>ಋ)</td><td>ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಅತಿಥಿ ಶಿಕ್ಷಕರಿಗೆ ತಲಾ ನೀಡಲಾಗುತ್ತಿರುವ ವೇತನವೆಷ್ಟು; ಇವರುಗಳಿಗೆ ವೇತನ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸುವುದೇ?</td><td>ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಮಾದರಿಯಲ್ಲಿ ಮಾಹೆಯಾನ ರೂ.10,500/- ಗೌರವಧನ ಪಾವತಿಸಲಾಗುತ್ತಿದ್ದು, ವೇತನ ಪರಿಷ್ಕರಣೆಯ ವಿಷಯವು ಸಧ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.</td></tr>
</table>

**ಸಂಖ್ಯೆ: MWD 33 LMQ 2024**

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು